ಆ) ಸರ್ಕಾರದ ಆರ್ಥಿಕ ಮಾದರಿಯಂತೆ ಒಳಚರಂಡಿ ಯೋಜನೆಯ ಅಂದಾಜು ವೆಚ್ಚದ ಶೇ.20 ರಷ್ಟು ಸ್ಥಳೀಯ ಸಂಸ್ಥೆಯಿಂದ ಪಾವತಿ ಮಾಡಬೇಕಾಗಿರುತ್ತದೆ. ಬಾಕಿ. ಶೇ 80 ಮೊತ್ತವನ್ನು ಆರ್ಥಿಕ ಸಂಸ್ಥೆಯಿಂದ ಸಾಲ ಹಾಗೂ ಸರ್ಕಾರದ ಸಾಲದ ರೂಪದಲ್ಲಿ ಒದಗಿಸಲಾಗುವುದು.

ಇ) ಬಂದಿದೆ.

ಈ) ಸ್ಥಳೀಯ ಸಂಸ್ಥೆಯಿಂದ ಭರಿಸಬೇಕಾದ ವಂತಿಗೆ ಮೊತ್ತವನ್ನು ಸ್ಥಳೀಯ ಸಂಸ್ಥೆಯಿಂದಲೇ ವ್ಯವಸ್ಥೆ ಮಾಡಬೇಕಾಗುತ್ತದೆ.

ಬೆಳಗಾವಿಯಲ್ಲಿ ವಿಧಾನ ಸಭೆಯ ಅಧಿವೇಶನ ನಡೆಸುವುದರ ಬಗ್ಗೆ

44 (23) : ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿಯಲ್ಲಿ ಕರ್ನಾಟಕ ವಿಧಾನ ಮಂಡಲದ ಅಧಿವೇಶನ ನಡೆಸುವ ಸಲುವಾಗಿ ಮನವಿಗಳು ಸರ್ಕಾರಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಬೆಳಗಾವಿಯಲ್ಲಿ ವಿಧಾನ ಸಭೆಯ ಅಧಿವೇಶನ ನಡೆಸಲು ಕ್ರಮ ಕೈಗೊಳ್ಳಲಾಗುವುದೇ?

ಶ್ರೀ ಡಿ.ಬಿ. ಚಂದ್ರೇಗೌಡ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು) :

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿರುವ ಕೆರೆಗಳ ಒತ್ತುವರಿ ಬಗ್ಗೆ

47 (412) : ಶ್ರೀ ಕೃಷ್ಣಪ್ಪ ವಿ. (ದೊಡ್ಡಬಳ್ಳಾಪುರ) ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು; ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿರುವ ಕೆರೆಗಳ ಸಂಖ್ಯೆ ಎಷ್ಟು;

ಆ) ಈ ಕೆರೆಗಳು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಹಾಗಿದ್ದಲ್ಲಿ ಒತ್ತುವರಿಯನ್ನು ತೆರವು ಗೊಳಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು?

ಶ್ರೀ ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ರಾಜ್ಯದಲ್ಲಿ 3223 ಕೆರೆಗಳು ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿರುತ್ತವೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 205 ಸಣ್ಣ ನೀರಾವರಿ ಕೆರೆಗಳಿದ್ದು, ಇವುಗಳಲ್ಲಿ ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ 39 ಸಣ್ಣ ನೀರಾವರಿ ಕೆರೆಗಳು ಇರುತ್ತವೆ.

ಆ) 3323 ಕೆರೆಗಳ ಪೈಕಿ 96 ಕೆರೆಗಳ ಅಂಗಳದ 997.49 ಹೆಕ್ಟೇರ್ ವಿಸ್ತೀರ್ಣ ಒತ್ತುವರಿ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಇ) ಈ ಕೆರೆಗಳಲ್ಲಿ ಒತ್ತುವರಿ ಆಗಿರುವ ವಿಸ್ತೀರ್ಣ 997.49 ಹೆಕ್ಟೇರ್ ಪೈಕಿ ಈಗಾಗಲೇ 364.09 ಹೆಕ್ಟೇರ್ ಒತ್ತುವರಿ ತೆರವುಗೊಳಿಸಲಾಗಿದೆ.

1. ಅನಂತರ ಈ ಕೆರೆಗಳಲ್ಲಿ ಮತ್ತೆ ಒತ್ತುವರಿ ಆಗದಂತೆ ತಡೆಯಲು ಮತ್ತು ಉಳಿದ ಕೆರೆಗಳಲ್ಲಿ ಒತ್ತುವರಿ ಆಗಿರುವುದನ್ನು ತಿಳಿಯಲು ಎಲ್ಲಾ ಕೆರೆಗಳ ಭೂಮಾಪನ